## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 544(680)
ಮಾನ್ಯ ಸದಸ್ಯರ ಹೆಸರು: ಶ್ರೀ ಐವನ್ ಡಿ'ಸೋಜಾ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು
ಉತ್ತರಿಸಬೇಕಾದ ದಿನಾಂಕ: 22.07.2024.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಎಷ್ಟು ಕನ್ನಡ ಮಾಧ್ಯಮ ಶಾಲೆಗಳು 2021 ರಿಂದ 2024ರವರೆಗೆ ವಿದ್ಯಾರ್ಥಿಗಳಿಲ್ಲದೆ ಮುಚ್ಚಲ್ಪಟ್ಟಿದೆ; ಈ ಮುಚ್ಚಲ್ಪಟ್ಟ ಶಾಲೆಗಳ ಆಸ್ತಿಯನ್ನು ಯಾರು ಉಸ್ತುವಾರಿ ನೋಡಿಕೊಳ್ಳುವರು (ವಿವರ ನೀಡುವುದು). | ರಾಜ್ಯಾದ್ಯಂತ ಯಾವುದೇ ಸರ್ಕಾರಿ ಶಾಲೆಗಳು ಮುಚ್ಚಲ್ಪಟ್ಟಿರುವುದಿಲ್ಲ. ಮಕ್ಕಳ ಶೂನ್ಯ ದಾಖಲಾತಿಯಾದಲ್ಲಿ ತಾತ್ಕಾಲಿಕವಾಗಿ ಶಾಲೆಯನ್ನು ಸ್ಥಗಿತಗೊಳಿಸಲಾಗುತ್ತದೆ. ಒಂದು ವೇಳೆ ಭವಿಷ್ಯದಲ್ಲಿ ಮಕ್ಕಳು ದಾಖಲಾದಲ್ಲಿ ಪುನ: ಶಾಲೆಯನ್ನು ಪ್ರಾರಂಭಿಸಲಾಗುವುದು. |
| ಆ) | ಮುಚ್ಚಲ್ಪಟ್ಟ ಶಾಲೆಗಳ ಆವರಣಗಳಲ್ಲಿ ಸಾರ್ವಜನಿಕರು ಅಕ್ರಮ ವ್ಯವಹಾರಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: (ವಿವರ ನೀಡುವುದು). | |
| ಇ) | ಮುಚ್ಚಲ್ಪಟ್ಟ ಶಾಲೆಗಳ ಆಸ್ತಿಯನ್ನು ಯಾವ ಉದ್ದೇಶಕ್ಕಾಗಿ ಕಾಯ್ದಿರಿಸಲು ಕ್ರಮ ಕೈಗೊಳ್ಳಲಾಗಿದೆ: (ವಿವರ ನೀಡುವುದು). | |
| ಈ) | ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಹಾಜರಾತಿಯನ್ನು ಹೆಚ್ಚಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು). | **ದಾಖಲಾತಿ ಹೆಚ್ಚಳಕ್ಕೆ ಸರ್ಕಾರದ ಕ್ರಮಗಳು:-**<br>1. ವಿದ್ಯಾರ್ಥಿಗಳಿಗೆ ಉಚಿತ ಪಠ್ಯ ಪುಸ್ತಕ, ಸಮವಸ್ತ್ರ, ಶೂ, ಸಾಕ್ಸ್, ಮಧ್ಯಾಹ್ನದ ಉಪಹಾರ, ಕ್ಷೀರಭಾಗ್ಯ ಉಚಿತವಾಗಿ ನೀಡಲಾಗುತ್ತದೆ.<br>2. ಶಾಲೆಗಳ ಮೂಲಭೂತ ಸೌಕರ್ಯ ಅಭಿವೃದ್ಧಿಪಡಿಸಲಾಗಿದೆ.<br>3. ಗುಣಾತ್ಮಕ ಶಿಕ್ಷಣಕ್ಕಾಗಿ ನಿಯಮಿತವಾಗಿ ಶಿಕ್ಷಕರಿಗೆ ತರಬೇತಿ ಆಯೋಜಿಸಲಾಗುತ್ತದೆ.<br>4. ಸರ್ಕಾರಿ ಶಾಲೆಗಳಲ್ಲಿ ತಂತ್ರಜ್ಞಾನ ಆಧಾರಿತ ಶಿಕ್ಷಣವನ್ನು ಪ್ರೋತ್ಸಾಹಿಸಲಾಗುತ್ತಿದೆ.<br>5. 74 ಶೈಕ್ಷಣಿಕವಾಗಿ ಹಿಂದುಳಿದ ತಾಲ್ಲೂಕುಗಳಲ್ಲಿ 6 ರಿಂದ 10ನೇ ತರಗತಿಯವರೆಗೆ ಇಂಗ್ಲೀಷ್ ಮಾಧ್ಯಮದಲ್ಲಿ ಕೇಂದ್ರೀಯ ವಿದ್ಯಾಲಯ ಮಾದರಿಯಲ್ಲಿ ಆದರ್ಶ ವಿದ್ಯಾಲಯಗಳನ್ನು (ಮಾದರಿ ಶಾಲೆಗಳು) ಪ್ರಾರಂಭಿಸಲಾಗಿದೆ.<br>6. ವಿಶೇಷ ಚೇತನ ಮಕ್ಕಳಿಗೆ ವೈದ್ಯಕೀಯ ಶಿಬಿರಗಳನ್ನು ಏರ್ಪಡಿಸಲಾಗುತ್ತಿದೆ ಮತ್ತು ನ್ಯೂನ್ಯತೆಗನುಗುಣವಾಗಿ ಸಾಧನ ಸಲಕರಣೆಗಳನ್ನು ನೀಡಲಾಗುತ್ತಿದೆ.<br>7. ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಲು |

| | | |
|---|---|---|
| | | 86 ವಸತಿ ನಿಲಯಗಳನ್ನು ಪ್ರಾರಂಭಿಸಲಾಗಿದೆ. ಸದರಿ ವಸತಿ ನಿಲಯಗಳಲ್ಲಿ ಯೋಗ, ಕರಾಟೆ ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br>8. ಶಿಕ್ಷಣದಿಂದ ವಂಚಿತರಾದ ವಿದ್ಯಾರ್ಥಿಗಳನ್ನು ಗುರುತಿಸಿ ಸಂಬಂಧಿಸಿದ ಪೋಷಕರು ಮತ್ತು ವಿದ್ಯಾರ್ಥಿಗಳನ್ನು ಮನವೊಲಿಸಿ, ಪುನ: ಶಾಲೆಗೆ ದಾಖಲಿಸಲಾಗುತ್ತಿದೆ. ಈ ಕಾರ್ಯವನ್ನು ಎಸ್ ಡಿಎಮ್‌ಸಿ, ಸ್ಥಳೀಯ ಸಂಸ್ಥೆಗಳು ಹಾಗೂ ಸಮುದಾಯದ ಸಹಕಾರದೊಂದಿಗೆ ನಿರ್ವಹಿಸಲಾಗುತ್ತಿದೆ.<br>9. ಎಸ್.ಎ.ಟಿ.ಎಸ್ ವ್ಯವಸ್ಥೆ ಮೂಲಕ ವಿದ್ಯಾರ್ಥಿಗಳ ಸಾಧನೆಯನ್ನು ಜಾಡುಹಿಡಿಯಲಾಗುತ್ತಿದೆ.<br>10. ಶಾಲಾ ದತ್ತು ಯೋಜನೆ (ಸಿ.ಎಸ್.ಆರ್) ಮೂಲಕ ಶಿಕ್ಷಣದ ಗುಣಮಟ್ಟವನ್ನು ಉತ್ತಮಪಡಿಸಲಾಗುತ್ತಿದೆ.<br>11. 6 ಮತ್ತು 8ನೇ ತರಗತಿಗೆ 12429 ಜಿ.ಪಿ.ಟಿ ಶಿಕ್ಷಕರ ನೇಮಕಾತಿ ಮಾಡಿಕೊಳ್ಳುವ ಮೂಲಕ ಗುಣಾತ್ಮಕ ಶಿಕ್ಷಣಕ್ಕಾಗಿ ಕ್ರಮವಹಿಸಲಾಗಿದೆ<br>12. 2021-22 & 2022-23 ರಲ್ಲಿ ಕಲಿಕಾಚೇತರಿಕೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿ ಶಿಕ್ಷಕರಿಗೆ ಕೋವಿಡ್ ಸಮಯದಲ್ಲಿ ತರಬೇತಿ ನೀಡಿ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ಒತ್ತು ನೀಡಲಾಗಿದೆ.<br>13. 2024-25ನೇ ಸಾಲಿನಲ್ಲಿ ರಾಜ್ಯಾದ್ಯಂತ ಖಾಲಿ ಇರುವ ಹುದ್ದೆಗಳಿಗೆದುರಾಗಿ ತಾತ್ಕಾಲಿಕವಾಗಿ ಪ್ರಾಥಮಿಕ ಶಾಲೆಗಳಿಗೆ 33863 ಅತಿಥಿ ಶಿಕ್ಷಕರನ್ನು ಮತ್ತು ಪ್ರೌಢಶಾಲೆಗಳಿಗೆ 8954 ಅತಿಥಿ ಶಿಕ್ಷಕರನ್ನು ನೇಮಿಸಿಕೊಂಡು ಮಕ್ಕಳ ಕಲಿಕೆಗೆ ಪ್ರೋತ್ಸಾಹಿಸಲಾಗಿರುತ್ತದೆ.<br>14. ಪ್ರಸ್ತುತ 2024-25ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಹಾಲಿ ನಡೆಯುತ್ತಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳ ಪೈಕಿ 55 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗಳನ್ನಾಗಿ ಉನ್ನತೀಕರಿಸಲಾಗಿರುತ್ತದೆ ಹಾಗೂ 1 ರಿಂದ 7ನೇ ತರಗತಿ ನಡೆಯುತ್ತಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳ ಪೈಕಿ 41 ಶಾಲೆಗಳನ್ನು 8ನೇ ತರಗತಿಗೆ ಉನ್ನತೀಕರಿಸಲಾಗಿರುತ್ತದೆ.<br>15. ರಾಜ್ಯದ ಸರ್ಕಾರಿ & ಅನುದಾನಿತ |

| | | |
|---|---|---|
| | | ಶಾಲೆಗಳಿಂದ ಸಾಧನೆ ಮಾಡಿದ ಶಿಕ್ಷಕರುಗಳಿಗೆ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಮಾಡಿ ಸನ್ಮಾನಿಸಲಾಗುತ್ತಿದೆ. ಇದರಿಂದಾಗಿ ಶಿಕ್ಷಕರು ತಮ್ಮ ಬೋಧನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳುವುದರೊಂದಿಗೆ ಪರಿಣಾಮಕಾರಿ ಪಾಠ ಬೋಧನೆಗೆ ಶ್ರಮಿಸುವರು.<br>16. ಪ್ರತಿ ವರ್ಷ ರಾಜ್ಯದಲ್ಲಿ 8 ಉತ್ತಮ ಶಾಲೆಗಳನ್ನು ಗುರುತಿಸಿ ಸ್ವಾಭಿಮಾನಿ ಶಾಲೆಗಳಾಗಿ ಆಯ್ಕೆ ಮಾಡಿ ಸರ್ಕಾರದಿಂದ ಅನುದಾನವನ್ನು ನೀಡಲಾಗುತ್ತಿದೆ.<br>17. ರಾಜ್ಯದ ಎಲ್ಲಾ ಶಾಲೆಗಳಿಗೆ ಸಿ.ಆರ್.ಪಿ ಬಿ.ಆರ್.ಪಿ., ಬಿ.ಆರ್.ಸಿ, ಡಯಟ್ ಉಪನ್ಯಾಸಕರು, ವಿಷಯ ಪರಿವೀಕ್ಷಕರು ಹಾಗೂ ನೋಡಲ್ ಅಧಿಕಾರಿಗಳು ಪ್ರತಿ ಮಾಹೆ ಸದರಿ ಶಾಲೆಗಳಿಗೆ ಭೇಟಿ ನೀಡುವುದರೊಂದಿಗೆ ಅಗತ್ಯ ಸಲಹೆ, ಸೂಚನೆ, ಮಾರ್ಗದರ್ಶನ ನೀಡಿ ಅನುಪಾಲನೆ ಮಾಡಲು ಸೂಚಿಸಲಾಗಿರುತ್ತದೆ<br>18. ಪಿ.ಆರ್.ಡಿ.ಎಫ್ ಯೋಜನೆಯಡಿ ಗ್ರಾಮಸಭೆ ನಡೆಸುವ ಮೂಲಕ ಮಕ್ಕಳ ದಾಖಲಾತಿ ಆಂದೋಲನವನ್ನು ಹಮ್ಮಿಕೊಂಡು ಮಕ್ಕಳ ದಾಖಲಾತಿ ಹೆಚ್ಚಿಸಲು ಕ್ರಮವಹಿಸಲಾಗಿದೆ.<br>19. ಎನ್.ಟಿ.ಎಸ್.ಇ / ಎನ್.ಎಂ.ಎಂ.ಎಸ್ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಡಿ.ಎಸ್.ಇ.ಆರ್.ಟಿ & ಎಂ.ಹೆಚ್.ಆರ್.ಡಿ ಮೂಲಕ ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.<br><br>ಶಾಲೆ ಬಿಟ್ಟ ಮಕ್ಕಳನ್ನು ಮರಳಿ ಶಾಲೆಗೆ ಕರೆತರಲು ಪ್ರತಿ ಬ್ಲಾಕ್‌ನಲ್ಲಿ ನೋಡಲ್ ಅಧಿಕಾರಿಗಳನ್ನು ನೇಮಿಸಿ ಪೋಷಕರ & ಮಕ್ಕಳ ಮನವೊಲಿಸಿ ಶಾಲೆಗೆ ಕರೆತರಲು ಕ್ರಮವಹಿಸಲಾಗುತ್ತಿದೆ. |
| ಉ) | ಶಾಲೆಗಳಲ್ಲಿ ವಿದ್ಯುತ್‌ನ್ನು ಉಚಿತವಾಗಿ ನೀಡುವುದರಿಂದ ಇಲಾಖೆಗೆ ಬರುವ ಹೆಚ್ಚುವರಿ ವೆಚ್ಚ ಎಷ್ಟು? (ವಿವರ ನೀಡುವುದು). | ಶಾಲೆಗಳಲ್ಲಿ ವಿದ್ಯುತ್ ಉಚಿತವಾಗಿ ನೀಡುವುದರಿಂದ ವಾರ್ಷಿಕವಾಗಿ ಅಂದಾಜು ರೂ.2297.64 ಲಕ್ಷಗಳ ಹೆಚ್ಚುವರಿ ಅನುದಾನ ಅಗತ್ಯವಿದೆ. |

**ಇಪಿ 51 ಪಿಎಂಎ 2024**

(**ಎಸ್. ಮಧು ಬಂಗಾರಪ್ಪ**)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು